ಕರ್ನಾಟಕ ಸರ್ಕಾರ.

ಸಂಖ್ಯೆ: ಕಂಇ 06 ಮುನೋಮು 2013

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 18-07-2014.

**<u>ಸುತ್ತೋಲೆ</u>**

**ವಿಷಯ:-** ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ಥಿರ ಸ್ವತ್ತುಗಳನ್ನು ನೋಂದಣಿ ಮಾಡುವಾಗ ಅನುಸರಿಸುವ ಕ್ರಮ.

ಉಲ್ಲೇಖ:-1) ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 344 ಮುನೋಮು 2008, ದಿನಾಂಕ:06-04-2009.

2) ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 6 ಮುನೋಮು 2013, ದಿನಾಂಕ: 23-04-2014.

********

ಪ್ರಸ್ತಾವಿತ ವಿಷಯಕ್ಕೆ ಸಂಬಂಧಿಸಿದಂತೆ, ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ಥಿರ ಸ್ವತ್ತುಗಳನ್ನು ನೋಂದಣಿ ಮಾಡುವ ಸಮಯದಲ್ಲಿ ಕ್ರಮ ಬದ್ಧವಾದ ಸ್ವತ್ತುಗಳಿಗೆ ನಮೂನೆ-9 ಮತ್ತು 11-ಎ ಹಾಗೂ ಕ್ರಮ ಬದ್ಧವಲ್ಲದ ಸ್ವತ್ತುಗಳಿಗೆ 11-ಬಿ ಮಾತ್ರ ಪಡೆದು ನೋಂದಾಯಿಸಲು ನಿರ್ದೇಶನ ನೀಡಲಾಗಿತ್ತು.

ಕಾವೇರಿ ತಂತ್ರಾಂಶ ಮತ್ತು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ವತ್ತುಗಳಿಗಾಗಿ ಇರುವ "ಇ-ಸ್ವತ್ತು" ತಂತ್ರಾಂಶವನ್ನು ಸಂಯೋಜನೆಗೊಳಿಸಿರುವುದರಿಂದ ದಿನಾಂಕ: 18-07-2014 ರಿಂದ ಕೃಷಿ ಜಮೀನಿನ ನೋಂದಣಿಗೆ "ಭೂಮಿ" ತಂತ್ರಾಂಶದಿಂದ ಮಾಹಿತಿ ಪಡೆದು ನೋಂದಣಿ ಮಾಡುವ ವಿಧಾನದಲ್ಲೇ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ವತ್ತುಗಳಿಗೆ ಇರುವ "ಇ-ಸ್ವತ್ತು" ತಂತ್ರಾಂಶದಿಂದ ಮಾಹಿತಿ ಪಡೆದು ನೋಂದಣಿ ಮಾಡಲು ಆದೇಶಿಸಿದೆ.

ಒಂದು ವೇಳೆ "ಇ-ಸ್ವತ್ತು" ತಂತ್ರಾಂಶದಲ್ಲಿ ಮಾಹಿತಿ ಲಭ್ಯವಿಲ್ಲದಿದ್ದಲ್ಲಿ ಕಾವೇರಿ ತಂತ್ರಾಂಶದಿಂದ ಉತ್ಪತ್ತಿಯಾಗುವ ಹಿಂಬರಹವನ್ನು ದಸ್ತಾವೇಜನ್ನು ಹಾಜರು ಪಡಿಸುವ ಪಕ್ಷಕಾರರಿಗೆ ನೀಡಲು ಸೂಚಿಸಿದೆ.

ಇದನ್ನು ಹೊರತುಪಡಿಸಿ ಬೇರೆ ಯಾವುದೇ ವಿಧಾನದಲ್ಲಿ ನೋಂದಣಿ ಮಾಡಿದಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಟಿ.ನಾರಾಯಣಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಕಂದಾಯ ಇಲಾಖೆ
(ನೋಂದಣಿ ಮತ್ತು ಮುದ್ರಾಂಕ)

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು-ಮುಂದಿನ ವಿಶೇಷ ಸಂಚಿಕೆಯಲ್ಲಿ